ರಾಜ್ಯದಲ್ಲಿ ನಕಲಿ ವೈದ್ಯರ ಹಾವಳಿ ತಡೆಗಟ್ಟುವುದು

2501 (3355) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ನಕಲಿ ವೈದ್ಯರ ಹಾವಳಿ ದಿನೇ ದಿನೇ ಹೆಚ್ಚಾಗುತ್ತ ಇರುವುದನ್ನು ಸರ್ಕಾರ ಮನಗಂಡಿದೆಯೇ?

ಆ) ನಕಲಿ ವೈದ್ಯರನ್ನು ನಿರ್ಬಂಧಿಸಲು ಸರ್ಕಾರ ಕ್ರಮಗಳನ್ನೇನಾದರೂ ರೂಪಿಸಿದೆಯೇ?

ಇ) ಹಾಗಿದಲ್ಲಿ, ಅದರ ವಿವರಗಳೇನು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಹೌದು

ಆ) ಹೌದು

ಇ) ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯಕೀಯ ವೃತ್ತಿದಾರರ ಅಧಿನಿಯಮ 1961ರ ಕಲಮು 34ರ ಪ್ರಕಾರ ವೈದ್ಯ ಪದ್ಧತಿಯ ವೈದ್ಯಕೀಯ ನೋಂದಣಿ ಹೊಂದದೆ ಯಾವುದೇ ವ್ಯಕ್ತಿಯು ವೈದ್ಯಕೀಯ ವೃತ್ತಿ ನಡೆಸುವುದನ್ನು ಅಪರಾಧ ಎಂಬುದಾಗಿ ಪರಿಗಣಿಸಿದೆ. ಇಂತಹ ಅಪರಾಧವನ್ನು ಎಸಗುವ ನಕಲಿ ವೈದ್ಯರುಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಮೇಲ್ಕಂಡ ಅಧಿನಿಯಮದ ಕಲಮು 40(2) ಪ್ರಕಾರ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ಮಂಡಳಿಯಲ್ಲಿ ರಿಜಿಸ್ಟ್ರಾರ್‌ರವರಿಗೆ ಅಧಿಕಾರವನ್ನು ಸರ್ಕಾರವು ನೀಡಿದೆ. ಅದರಂತೆ ರಿಜಿಸ್ಟ್ರಾರ್‌ರವರು ನೋಂದಣಿ ಮಾಡದೇ ಇರುವ ನಕಲಿ ವೈದ್ಯರ ಮೇಲೆ ಕ್ರಮ ಜರುಗಿಸಲು ಅಧಿಕಾರವುಳ್ಳವರಾಗಿರುತ್ತಾರೆ. ಈ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಶಸ್ತ್ರಚಿಕಿತ್ಸಕರು, ತಾಲ್ಲೂಕು ಮಟ್ಟದ ವೈದ್ಯಾಧಿಕಾರಿಗಳು, ಹಾಗೂ ವಿಭಾಗೀಯ ಜಂಟಿ ನಿರ್ದೇಶಕರಿಗೆ ಅವರು ವ್ಯಾಪ್ತಿಯಲ್ಲಿ ಬರುವ ನಕಲಿ ವೈದ್ಯ ವೃತ್ತಿ ನಡೆಸುತ್ತಿರುವವರ ವಿರುದ್ಧ ದೂರು ಬಂದಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ತಿಳಿಸುವಂತೆ ಸೂಚನೆ ನೀಡಲಾಗಿದೆ.

ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ಕಟ್ಟಡ ದುರಸ್ತಿ

2502 (3356) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.